**ಕರ್ನಾಟಕ ಸರ್ಕಾರ**

ಸಂ: ಡಿ.ವೈ.ಇ.ಎಸ್/ಕ್ರೀ.ಚ.ಪ್ರೋ/72/2023-24

ಆಯುಕ್ತರ ಕಾರ್ಯಾಲಯ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ:26-10-2023.

## <u>ಸುತ್ತೋಲೆ</u>

ವಿಷಯ: 2023-24ನೇ ಸಾಲಿನ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

******

2023-24ನೇ ಸಾಲಿನಲ್ಲಿ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಯೋಜನೆಯಡಿಯಲ್ಲಿ ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರನ್ನು ಗುರುತಿಸಿ ಗೌರವಿಸಲು ಅವರಿಗೆ "ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ" ಯನ್ನು ನೀಡಬೇಕಾಗಿರುತ್ತದೆ. ಸದರಿ ಯೊಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯ ಮಾರ್ಗಸೂಚಿ ಮತ್ತು ಅರ್ಜಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಸಂಬಂಧಿಸಿದಂತೆ ಆಯಾ ಜಿಲ್ಲೆಗಳಲ್ಲಿ ಸದರಿ ಯೋಜನೆಯ ಮಾರ್ಗಸೂಚಿಗಳಂತೆ ಅರ್ಹ ಕ್ರೀಡಾ ಪೋಷಕರಿಂದ ಪ್ರಸ್ತಾವನೆಗಳನ್ನು ಆಹ್ವಾನಿಸಿ, ಸ್ವೀಕರಿಸಲಾದ ಪ್ರಸ್ತಾವನೆಗಳನ್ನು ದಿನಾಂಕ:30-11-2023ರೊಳಗೆ ಕೇಂದ್ರ ಕಛೇರಿಗೆ ಕಳುಹಿಸಲು ಸೂಚಿಸಿದೆ.

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು.
2. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
3. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
4. ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

# ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಅರ್ಜಿ ನಮೂನೆ

1 ಅರ್ಜಿ ಸಲ್ಲಿಸುವ ಕಂಪನಿ, ಸಂಸ್ಥೆಯ ಹೆಸರು:

( ದಯವಿಟ್ಟು ಸಾರ್ವಜನಿಕ, ಖಾಸಗಿ, ಸರ್ಕಾರೇತರ ಸಂಸ್ಥೆಯೇ ಎಂದು ನಮೂದಿಸಿ) :

2 ಪ್ರಶಸ್ತಿಗೆ ಕೆಳಕಾಣಿಸಿದ ಯಾವ ವಿಭಾಗದಲ್ಲಿ ಅರ್ಜಿ ಸಲ್ಲಿಸಲಾಗಿದೆ( ವಿಭಾಗವನ್ನು ಆಯ್ಕೆ ಮಾಡಿ)

ಅ. ಕ್ರೀಡಾ ಪ್ರತಿಭೆಯನ್ನು ಎಳೆಯ ಹಂತದಲ್ಲಿಯೇ ಗುರುತಿಸುವಿಕೆ ಮತ್ತು ಪ್ರೋತ್ಸಾಹಿಸುವಿಕೆ. ☐

ಆ. ಕಂಪನಿಗಳ ಸಾಮಾಜಿಕ ಜವಾಬ್ದಾರಿ ಅಡಿ ಕ್ರೀಡೆಗೆ ಪ್ರೋತ್ಸಾಹ: ☐

ಇ. ಕ್ರೀಡಾಪಟುಗಳಿಗೆ ಉದ್ಯೋಗ ನೀಡುವಿಕೆ ಮತ್ತು ಕ್ರೀಡಾ ಕಲ್ಯಾಣ ಕಾರ್ಯಕ್ರಮಗಳು ☐

ಈ. ಅಭಿವೃದ್ಧಿಗಾಗಿ ಕ್ರೀಡೆ ☐

ಉ. ವಿಶ್ವವಿದ್ಯಾನಿಲಯಗಳು/ಶಾಲಾ ಕಾಲೇಜುಗಳು ☐

3. ಸಂಪೂರ್ಣ ವಿಳಾಸ (ದೂರವಾಣಿ ಸಂಖ್ಯೆ ಮತ್ತು ಇ-ಮೇಲ್ ವಿಳಾಸದೊಂದಿಗೆ):

____________________________________________

____________________________________________

____________________________________________

4 ಕ್ರೀಡೆಯ ಬೆಳವಣಿಗೆಗಾಗಿ ಕಳೆದ ಮೂರು ವರ್ಷಗಳಲ್ಲಿ ನೀಡಿರುವ ನೆರವು (ಸಹಾಯ) (ವರ್ಷವಾರು)

ಅ. ರೂ ಗಳಲ್ಲಿ:

(ಕಳೆದ ಮೂರು ಆರ್ಥಿಕ ವರ್ಷಗಳಿಗೆ ಪ್ರತ್ಯೇಕವಾಗಿ ಒದಗಿಸುವುದು)

5. ಸಂಸ್ಥೆಯ ಸಂಕ್ಷಿಪ್ತ ವಿವರ:

(ಅಗತ್ಯವಿದ್ದಲ್ಲಿ ಪ್ರತ್ಯೇಕ ಪುಟದಲ್ಲಿ ನೀಡಬಹುದು)

6 ಅರ್ಜಿ ಸಲ್ಲಿಸಿದ ಪ್ರಶಸ್ತಿಯ ವಿಭಾಗದಲ್ಲಿ ನೀಡಲಾದ ನೆರವಿನ ಬಗ್ಗೆ ಆಯ್ಕೆ ಮಾನದಂಡಗಳಿಗೆ ಸಂಬಂಧಿಸಿದಂತೆ ಮಾಹಿತಿ ಒದಗಿಸುವುದು

| ಪ್ರಶಸ್ತಿ ವಿಭಾಗ | ಆಯ್ಕೆ ಮಾನದಂಡಗಳು | ಅಗತ್ಯವಿದ್ದಲ್ಲಿ ಹೆಸರುಗಳನ್ನು ಪ್ರತ್ಯೇಕ ಪುಟದಲ್ಲಿ ನೀಡುವುದು |
|---|---|---|
| ಕ್ರೀಡಾ ಪ್ರತಿಭೆಯನ್ನು ಎಳೆಯ ಹಂತದಲ್ಲಿಯೇ ಗುರುತಿಸುವಿಕೆ ಮತ್ತು ಪ್ರೋತ್ಸಾಹಿಸುವಿಕೆ: | 1. ಕಳೆದ ಮೂರು ವರ್ಷಗಳಲ್ಲಿ ಗುರುತಿಸಿ ಪೋಷಿಸಿದ ಕ್ರೀಡಾಪಟುಗಳ ಸಂಖ್ಯೆ (ವರ್ಷವಾರು)<br>2. ಕ್ರೀಡಾ ಮೂಲಭೂತ ಸೌಕರ್ಯಗಳನ್ನು ಸೃಜಿಸಿದ ವಿವರ<br>3. ಶಾಲೆ, ಕಾಲೇಜು, ಸಂಘಗಳು ಮತ್ತಿತರ ಘಟಕಗಳನ್ನು ದತ್ತು ತೆಗೆದುಕೊಂಡಿರುವ ಸಂಖ್ಯೆ<br>4. ತರಬೇತಿ ನೀಡಿದ ಕ್ರೀಡಾಪಟುಗಳ ಸಂಖ್ಯೆ<br>5. ಕ್ರೀಡಾಕಿಟ್ ಮತ್ತಿತರ ನೆರವು<br>6. ಕ್ರೀಡಾಕೂಟಗಳು ಮತ್ತು ಪಂದ್ಯಗಳನ್ನು ಆಯೋಜಿಸಿರುವ ಸಂಖ್ಯೆ.<br>7. ಗುರುತಿಸಿದ ಕ್ರೀಡಾಪಟುಗಳ ಕ್ರೀಡಾಸಾಧನೆ<br>8. ಕ್ರೀಡಾಪಟುಗಳಿಗಾಗಿ ಪ್ರಾರಂಭಿಸಿರುವ ಇತರ ಉಪಕ್ರಮಗಳು | |
| ಕಂಪನಿಗಳ ಸಾಮಾಜಿಕ ಜವಾಬ್ದಾರಿ ಅಡಿ ಕ್ರೀಡೆಗೆ ಪ್ರೋತ್ಸಾಹ: | 1. ಕಂಪನಿಗಳ ಸಾಮಾಜಿಕ ಜವಾಬ್ದಾರಿ ಅಡಿ ಕ್ರೀಡಾ ಚಟುವಟಿಕೆಗಳಿಗೆ ಮೀಸಲಿರಿಸಿದ ಅನುದಾನ (ಕಳೆದ ಮೂರು ವರ್ಷಗಳ ವಿವರ)<br>2. ಕ್ರೀಡಾ ಚಟುವಟಿಕೆಗಳ ವಿವರ (ಕ್ರೀಡಾ ಮೂಲಭೂತ ಸೌಕರ್ಯಗಳ ಸೃಜನೆ, ಅಭಿವೃದ್ಧಿ/ಉನ್ನತೀಕರಣ, ಕ್ರೀಡಾ ಸಾಮಗ್ರಿಗಳ ಪೂರೈಕೆ, ತರಬೇತುದಾರರ ನಿಯೋಜನೆ, ಕ್ರೀಡಾಕೂಟಗಳ ಆಯೋಜನೆ, ಕ್ರೀಡಾ ತರಬೇತಿಗಾಗಿ ಸಿ.ಎಸ್.ಆರ್. ಅಡಿ ಅನುದಾನ ವ್ಯಯಿಸಿರುವ ವಿವರ) | |
| ಕ್ರೀಡಾಪಟುಗಳಿಗೆ ಉದ್ಯೋಗ ನೀಡುವಿಕೆ ಮತ್ತು ಕ್ರೀಡಾ ಕಲ್ಯಾಣ ಕಾರ್ಯಕ್ರಮಗಳು: | 1. ಕಳೆದ ಮೂರು ವರ್ಷಗಳಲ್ಲಿ ಕ್ರೀಡಾಪಟುಗಳಿಗೆ ಉದ್ಯೋಗ ಒದಗಿಸಿದ ವಿವರ (ವರ್ಷವಾರು ಸಂಖ್ಯೆ)<br>2. ನೇಮಕಾತಿ ಹಂತ ಮತ್ತು ವೇತನ ವಿವರ | |

| | | |
|---|---|---|
| | 3. ಉದ್ಯೋಗದಲ್ಲಿ ಒದಗಿಸಿದ ಬಡ್ತಿ ಅವಕಾಶಗಳು<br>4. ಉದ್ಯೋಗ ಪಡೆದ ಕ್ರೀಡಾಪಟುಗಳ ಕ್ರೀಡಾ ಸಾಧನೆ<br>5. ಇತರ ಕ್ರೀಡಾ ಕಲ್ಯಾಣ ಕಾರ್ಯಕ್ರಮಗಳು | |
| ಅಭಿವೃದ್ಧಿಗಾಗಿ ಕ್ರೀಡೆ | 1. ಕ್ರೀಡೆಯನ್ನು ಅಭಿವೃದ್ಧಿ ಮತ್ತು ಶಾಂತಿ ಸ್ಥಾಪನ ಉದ್ದೇಶಗಳ ಈಡೇರಿಕೆಗಾಗಿ ಬಳಸಿಕೊಳ್ಳಲು ಆಯೋಜಿಸಿದ ಕಾರ್ಯಕ್ರಮಗಳ ವಿವರ<br>2. ಸಮಾಜದ ಎಲ್ಲರಿಗೂ ಸುರಕ್ಷಿತವಾಗಿ ಕ್ರೀಡಾ ವಾತಾವರಣ ದೊರಕುವಂತಾಗಲು ಕೈಗೊಂಡ ಚಟುವಟಿಕೆಗಳು<br>3. ಕ್ರೀಡೆ ಮತ್ತು ದೈಹಿಕ ಚಟುವಟಿಕೆಗಳನ್ನು ಸಮರ್ಥವಾಗಿ ನೀಡಲು ಶಾಲೆಗಳು ಮತ್ತು ಶಿಕ್ಷಕರ ಸಾಮರ್ಥ್ಯ ಅಭಿವೃದ್ಧಿ ಹೆಚ್ಚಳಕ್ಕಾಗಿ ಆಯೋಜಿಸಿದ ಚಟುವಟಿಕೆಗಳು<br>4. ಸಂಸ್ಥೆಯು ಪ್ರಾರಂಭವಾದ ವರ್ಷ | |
| ವಿಶ್ವವಿದ್ಯಾನಿಲಯಗಳು/ ಶಾಲಾ ಕಾಲೇಜುಗಳು | 1. ಕ್ರೀಡಾಪಟುಗಳಿಗೆ ಪ್ರವೇಶಾತಿಯಲ್ಲಿ ಮೀಸಲಾತಿ (ಕಳೆದ ಮೂರು ವರ್ಷಗಳ ಪ್ರತ್ಯೇಕ ಸಂಖ್ಯೆ)<br>2. ಕ್ರೀಡಾಪಟುಗಳಿಗೆ ನೀಡಲಾದ ಇತರ ಸೌಲಭ್ಯಗಳು (ಕೃಪಾಂಕಗಳು, ಕ್ರೀಡಾ ಕಿಟ್, ಹಾಜರಾತಿ ವಿನಾಯಿತಿ, ಇತ್ಯಾದಿ)<br>3. ಪ್ರವೇಶ ನೀಡಿದ ಕ್ರೀಡಾಪಟುಗಳ ಸಾಧನೆ (ಕಳೆದ ಮೂರು ವರ್ಷಗಳ ಸಾಧನೆ ವಿವರಗಳು ಪ್ರತ್ಯೇಕ )<br>4. ಕ್ರೀಡಾಪಟುಗಳಿಗಾಗಿ ಪ್ರಾರಂಭಿಸಲಾದ ಕ್ರೀಡಾ ವಿಷಯಗಳು | |

7. ಇತರ ಸಾಧನೆಗಳು

8. ಇತರ ಪ್ರಶಸ್ತಿಗಳು:

(ರಾಜ್ಯ ಸರ್ಕಾರ/ಕೇಂದ್ರ ಸರ್ಕಾರ/

ಇತರ ಸಂಘ-ಸಂಸ್ಥೆಗಳಿಂದ ಪಡೆದಿದ್ದಲ್ಲಿ)

12

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ' ನೀಡುವ ಬಗ್ಗೆ.

ಓದಲಾಗಿದೆ : ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ: ಡಿವೈಎಸ್ಎಸ್/ಕ.ಕ್ರೀ.ಪೋ.ಪ್ರ/ಕ್ರೀ.ಕ.ಪಂ/02/2017-18 ದಿನಾಂಕ:19.04.2017.

******

ಪ್ರಸ್ತಾವನೆ:

2017-18ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ ಕಂಡಿಕೆ 275ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.

> "ಪ್ರತಿ ವರ್ಷ 10 ಜನ ಕ್ರೀಡಾ ಪ್ರವರ್ತಕರನ್ನು ಗುರುತಿಸಿ, ಗೌರವಿಸಲು ಪ್ರಸಕ್ತ ವರ್ಷದಿಂದ ತಲಾ 5 ಲಕ್ಷ ರೂ.ಗಳ 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'ಯನ್ನು ಪ್ರತಿಷ್ಠಾಪಿಸಲಾಗುವುದು."

ಮೇಲೆ ಓದಲಾದ (1)ರ ಪತ್ರದಲ್ಲಿ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ರಾಜ್ಯದ ಕ್ರೀಡಾ ಪೋಷಕರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ 2017-18ನೇ ಸಾಲಿನಿಂದ ಜಾರಿಗೆ ಬರುವಂತೆ 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'ಯನ್ನು ನೀಡುವ ಸಂಬಂಧ ಯೋಜನೆಯ ಮಾರ್ಗಸೂಚಿಗಳೊಂದಿಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 95 ಯುಸೇಕ್ರೀ 2017**

**ಬೆಂಗಳೂರು, ದಿನಾಂಕ:25.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರನ್ನು ಗುರುತಿಸಿ ಪ್ರತಿ ವರ್ಷ 10 ಜನ ಅತ್ಯುನ್ನತ ಕ್ರೀಡಾ ಸಾಧಕರನ್ನು ಗೌರವಿಸಲು 2017-18ನೇ ಸಾಲಿನಿಂದ ಜಾರಿಗೆ ಬರುವಂತೆ ತಲಾ ರೂ. 5.00 ಲಕ್ಷ (ಐದು ಲಕ್ಷ ರೂಪಾಯಿಗಳು ಮಾತ್ರ) ನಗದು ಬಹುಮಾನದೊಂದಿಗೆ 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'ಯನ್ನು ನೀಡುವ ಯೋಜನೆಯನ್ನು ಇದರೊಂದಿಗೆ ಲಗತ್ತಿಸಿರುವ ಮಾರ್ಗಸೂಚಿಗಳನುಸಾರ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಈ ಸಂಬಂಧದ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2204-00-104-0-02 015 ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ (ಯೋಜನೆ) ಅಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

....2

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆ.ಇ. 379 ವೆಚ್ಚ-7/2017, ದಿನಾಂಕ:03.05.2017ರಲ್ಲಿ ಹಾಗೂ ಯೋಜನಾ ಇಲಾಖೆಯು ಟಿಪ್ಪಣಿ ಸಂಖ್ಯೆ: ಯೋಇ 83 ಜಶಉ 2017, ದಿನಾಂಕ:09.05.2017ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್. ಪ್ರಭುಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಪಿ.ಬಿ. ನಂ.5329, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಇ & ಆರ್.ಎಸ್.ಎ), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು.
4. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ.
7. ಮಾನ್ಯ ಮೀನುಗಾರಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ/ಆರ್ಥಿಕ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಸರ್ಕಾರದ ಆದೇಶ ಸಂಖ್ಯೆ: ಯುಸೇಇ 95 ಯುಸೇಕ್ರೀ 2017, ದಿನಾಂಕ:25.05.2017ಕ್ಕೆ ಅನುಬಂಧ

### 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಯೋಜನೆ' ಅಡಿಯಲ್ಲಿ ಕರ್ನಾಟಕದ ಪ್ರತಿಭಾನ್ವಿತ ಕ್ರೀಡಾ ಪೋಷಕರನ್ನು ಗುರುತಿಸಿ ಆಯ್ಕೆ ಮಾಡುವ ಬಗ್ಗೆ ಮಾರ್ಗಸೂಚಿ.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ 2017-18ನೇ ಸಾಲಿನಿಂದ 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'ಯನ್ನು ನೀಡಿ ನೀಡಿ ಗೌರವಿಸಲಾಗುವುದು.

**ಉದ್ದೇಶ:**

ಅ) ರಾಜ್ಯದಲ್ಲಿ ಕ್ರೀಡಾಪಟುಗಳು ಕ್ರೀಡಾ ಕ್ಷೇತ್ರದಲ್ಲಿ ಸಾಧಿಸಿದ ಅತ್ಯುತ್ತಮ ಸಾಧನೆಗಳನ್ನು ಗುರುತಿಸಿ ಕ್ರೀಡಾ ಪೋಷಕರಿಗೆ ಪ್ರಶಸ್ತಿಯನ್ನು ನೀಡಿ ಪ್ರೋತ್ಸಾಹಿಸಲಾಗುವುದು.

ಆ) ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವುದು ಮತ್ತು ಕ್ರೀಡಾಪಟುಗಳನ್ನು ಗುರುತಿಸುವುದು.

ಇ) ಕ್ರೀಡಾಪಟುಗಳ ಅಭಿವೃದ್ಧಿಗೆ ಉತ್ತೇಜನ ನೀಡುವುದು.

ಈ) ಕ್ರೀಡಾಪಟುಗಳಿಗೆ ಉದ್ಯೋಗವನ್ನು ಸೃಷ್ಟಿಸುವ ಹಾಗೂ ಕ್ರೀಡಾ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಂಘಟಕರನ್ನು ಗುರುತಿಸುವುದು.

**ಪರಿಭಾಷೆ:**

ಈ ಮಾರ್ಗಸೂಚಿಗಳಲ್ಲಿ ಸಂದರ್ಭ ಅನ್ಯತಾ ಅಗತ್ಯಪಡಿಸಿದ ಹೊರತು

ಅ) ಕ್ರೀಡೆ: ಕ್ರೀಡೆಗೆ ಸಂಬಂಧಪಟ್ಟ ಪಟ್ಟಿ ಅನುಬಂಧ-2ರಲ್ಲಿ ಕಾಣಿಸಿರುವ ಕ್ರೀಡೆಗಳು

ಆ) ಸರ್ಕಾರ: ಕರ್ನಾಟಕ ಸರ್ಕಾರ

ಇ) ಇಲಾಖೆ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಈ) ವರ್ಷ: ಆರ್ಥಿಕ ವರ್ಷ (ಏಪ್ರಿಲ್ 1 ರಿಂದ ಮಾರ್ಚ್ 31 ರವರೆಗೆ)

ಉ) ಪ್ರಶಸ್ತಿ: ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ

ಊ) ಸಮಿತಿ: ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಆಯ್ಕೆ ಸಮಿತಿ/ಪರಿಶೀಲನಾ ಸಮಿತಿ

**ಅರ್ಜಿ ಸಲ್ಲಿಸುವ ವಿಧಾನ:**

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಈ ಕೆಳಕಾಣಿಸಿದ ಇಲಾಖೆ, ಸಂಘ-ಸಂಸ್ಥೆಗಳ ಮೂಲಕ ಅರ್ಜಿ ಸ್ವೀಕರಿಸಲಾಗುವುದು

ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಆ) ಕರ್ನಾಟಕ ಕ್ರೀಡಾ ಪ್ರಾಧಿಕಾರ

ಇ) ಕ್ರೀಡಾ ಸಂಘ/ಸಂಸ್ಥೆಗಳು

ಈ) ನೇರವಾಗಿ ಅರ್ಜಿ ಸಲ್ಲಿಸಬಹುದು

ಉ) ವಿಶ್ವವಿದ್ಯಾನಿಲಯ/ಕಾಲೇಜು

ಊ) ಮಾಧ್ಯಮ

ಅರ್ಜಿ ಸಲ್ಲಿಸುವ ವಿಧಾನ:

1. ಅರ್ಜಿಗಳನ್ನು ನಿಗಧಿತ ನಮೂನೆಯಲ್ಲಿ ನಿರ್ದೇಶಕರು/ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ನಿಗಧಿತ ದಿನಾಂಕದೊಳಗೆ ಸಲ್ಲಿಸತಕ್ಕದ್ದು.
2. ಅನುಬಂಧ-1ರಲ್ಲಿರುವ ಅರ್ಜಿ ನಮೂನೆಯ ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ತುಂಬತಕ್ಕದ್ದು.
3. 5 ವರ್ಷಗಳ ಕ್ರೀಡಾ ಸಾಧನೆಯ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
4. ರಾಷ್ಟ್ರ ಮತ್ತು ಅಂತರರಾಷ್ಟ್ರ ಮಟ್ಟದ ಕ್ರೀಡೆಗಳಲ್ಲಿ ಪ್ರಶಸ್ತಿ ನೀಡಿದ ವರ್ಷ ಸೇರಿದಂತೆ 5 ವರ್ಷಗಳ ಕ್ರೀಡಾ ಸಾಧನೆಯ ಪ್ರಸ್ತಾವನೆ/ವರದಿ, ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
5. ಅರ್ಜಿ ನಮೂನೆಯೊಂದಿಗೆ ನೀಡಿರುವ ಸ್ವಯಂ ಮೌಲ್ಯಮಾಪನ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಅರ್ಹತೆ:

1. ಕ್ರೀಡಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ 5 ವರ್ಷಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕೊಡುಗೆ ನೀಡಿದ ಕ್ರೀಡಾ ಪೋಷಕರು ಈ ಪ್ರಶಸ್ತಿಗೆ ಅರ್ಹರಿರುತ್ತಾರೆ.
2. ಕರ್ನಾಟಕ ನಿವಾಸಿಗಳಲ್ಲದ ಹಾಗೂ ರಾಜ್ಯದ ಕ್ರೀಡಾ ಕ್ಷೇತ್ರಕ್ಕೆ ತೊಡಗಿಸದೇ ಇರುವ ಕ್ರೀಡಾ ಪೋಷಕರುಗಳು ಈ ಪ್ರಶಸ್ತಿಗೆ ಅರ್ಹರಾಗಿರುವುದಿಲ್ಲ.
3. ಕ್ರಿಮಿನಲ್ ಹಿನ್ನೆಲೆ ಇಲ್ಲ ಎಂಬ ಬಗ್ಗೆ ಪೋಲಿಸ್ ವೆರಿಫಿಕೇಷನ್ ಸರ್ಟಿಫಿಕೇಟ್ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಪ್ರಶಸ್ತಿ:

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯು ಪ್ರಮಾಣ ಪತ್ರ, ಪ್ರಶಸ್ತಿ ಫಲಕ, ರೂ. 5.00 ಲಕ್ಷಗಳ ನಗದು ಬಹುಮಾನ ಒಳಗೊಂಡಿರುತ್ತದೆ.

ಅನರ್ಹತೆ:

'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'ಯನ್ನು ಈ ಕೆಳಕಂಡ ಕಾರಣಗಳಿಗಾಗಿ ರದ್ದುಗೊಳಿಸಬಹುದಾಗಿರುತ್ತದೆ.

ಅ) ಸುಳ್ಳು (ನಕಲಿ) ಪ್ರಮಾಣ ಪತ್ರ ಅಥವಾ

ಆ) ಯಾವುದೇ ಕಾರಣಕ್ಕೂ ಇವರು ಪ್ರಶಸ್ತಿಗೆ ಅರ್ಹರಾಗಿಲ್ಲದೇ ಇದ್ದಲ್ಲಿ,

ಇ) ಪ್ರಶಸ್ತಿಯ ಮಾರ್ಗಸೂಚಿಯನ್ನು ಅನುಸರಿಸದೇ ಇದ್ದ ಪಕ್ಷದಲ್ಲಿ,

ಈ) ನ್ಯಾಯಾಲಯದ ಆದೇಶ ಇದ್ದಲ್ಲಿ,

ಉ) ಪ್ರಶಸ್ತಿಯನ್ನು ನೀಡಬೇಕಾದ ಮಾಹಿತಿಯು ತಪ್ಪಾಗಿದ್ದು ಪ್ರಶಸ್ತಿಯನ್ನು ನೀಡಿದ್ದಲ್ಲಿ ಪ್ರಶಸ್ತಿ ನೀಡಿರುವುದು ತಪ್ಪೆಂದು ಕಂಡು ಬಂದಲ್ಲಿ ಪ್ರಶಸ್ತಿಯನ್ನು ಹಿಂದಕ್ಕೆ ಪಡೆಯಲಾಗುವುದು ಹಾಗೂ ಅಂತಹ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಪ್ರಶಸ್ತಿಗಾಗಿ ಶಿಫಾರಸ್ಸು ಮಾಡಿರುವ ಕ್ರೀಡಾ ಪೋಷಕರು ಈ ಪ್ರಶಸ್ತಿಯ ನೀತಿ ನಿಯಮಗಳನ್ನು ಒಪ್ಪಿಕೊಳ್ಳತಕ್ಕದ್ದು.

--3

ಪ್ರಶಸ್ತಿಯ ಸಂಖ್ಯೆ:

ಪ್ರತಿ ವರ್ಷ 10 ಕ್ರೀಡಾ ಪೋಷಕರುಗಳಿಗೆ ಮಾತ್ರ ಪ್ರಶಸ್ತಿಯನ್ನು ನೀಡತಕ್ಕದ್ದು. ಸಂಬಂಧಪಟ್ಟ ಕ್ರೀಡೆಗಳಲ್ಲಿ ಮಾಡಿರುವ 5 ವರ್ಷಗಳ ಗರಿಷ್ಠ ಕ್ರೀಡಾ ಸಾಧನೆಗಳನ್ನು ಪರಿಗಣಿಸಿ ಪ್ರತಿ ಕ್ರೀಡೆಗೆ ಒಂದರಂತೆ ಪ್ರಶಸ್ತಿ ನೀಡತಕ್ಕದ್ದು.

ಪರಿಶೀಲನಾ ಸಮಿತಿ:

ಕರ್ನಾಟಕ ಕ್ರೀಡಾ ಪೋಷಕರ ಪ್ರಶಸ್ತಿಗಾಗಿ ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಲು ನಿರ್ದೇಶಕರು/ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡಂತೆ ಪರಿಶೀಲನಾ ಸಮಿತಿ ರಚಿಸಲಾಗಿದೆ.

| ಕ್ರ.ಸಂ | ಹುದ್ದೆ | ಪದನಾಮ |
|---|---|---|
| 1 | ನಿರ್ದೇಶಕರು/ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | -ಅಧ್ಯಕ್ಷರು |
| 2 | ಸರ್ಕಾರದ ಹೆಚ್ಚುವರಿ/ಉಪ/ಜಂಟಿ ಕಾರ್ಯದರ್ಶಿಗಳು, ಯುವ ಸಬಲೀಕರಣ ಇಲಾಖೆ | - ಸದಸ್ಯರು |
| 3 | ಉಪ ನಿರ್ದೇಶಕರು (ಕ್ರೀ.ಕ.ಪಂ), ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | - ಸದಸ್ಯರು |
| 4 | ಉಪ ನಿರ್ದೇಶಕರು (ಕ.ಕ್ರೀ.ಪ್ರಾ), ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | - ಸದಸ್ಯರು |
| 5 | ಜಂಟಿ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | - ಸಂಚಾಲಕರು |

ಪರಿಶೀಲನಾ ಸಮಯದಲ್ಲಿ ಅಗತ್ಯತೆ ಕಂಡುಬಂದಾಗ ನಿವೃತ್ತ/ಹಿರಿಯ ಕ್ರೀಡಾಪಟುಗಳನ್ನು ಆಹ್ವಾನಿಸಿ ಸಲಹೆ ಪಡೆಯಬಹುದು. ಈ ಆಹ್ವಾನಿತರ ನೇಮಕದ ಬಗ್ಗೆ ನಿರ್ದೇಶಕರು/ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಸೂಕ್ತ ಆದೇಶವನ್ನು ಹೊರಡಿಸತಕ್ಕದ್ದು. ಹೀಗೆ ನೇಮಕಗೊಳ್ಳುವ ಅಧಿಕಾರೇತರ ಸದಸ್ಯರುಗಳ ಅವಧಿ 2 ವರ್ಷಗಳಾಗಿರುತ್ತದೆ.

ಆಯ್ಕೆ ಸಮಿತಿ:

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಆಯ್ಕೆಗಾಗಿ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಈ ಕೆಳಕಂಡಂತೆ ಆಯ್ಕೆ ಸಮಿತಿ ರಚಿಸಲಾಗಿದೆ. ಈ ಸಮಿತಿಯಲ್ಲಿರುವ ಅಧಿಕಾರೇತರ ಸದಸ್ಯರುಗಳ ಅವಧಿ 2 ವರ್ಷಗಳಾಗಿರುತ್ತದೆ.

| ಕ್ರ.ಸಂ | ಹುದ್ದೆ | ಪದನಾಮ |
|---|---|---|
| 1 | ಸರ್ಕಾರದ ಅಪರ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | -ಅಧ್ಯಕ್ಷರು |
| 2 | ಪ್ರಾದೇಶಿಕ ನಿರ್ದೇಶಕರು, ಭಾರತೀಯ ಕ್ರೀಡಾ ಪ್ರಾಧಿಕಾರ | - ಸದಸ್ಯರು |
| 3 | ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಅಸೋಸಿಯೇಷನ್, ಬೆಂಗಳೂರು | - ಸದಸ್ಯರು |
| 5 | ನಿರ್ದೇಶಕರು/ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | - ಸಂಚಾಲಕರು |

ಅಧಿಕಾರೇತರ ಸದಸ್ಯರುಗಳು 'ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ' ನೀಡುವ ಸಂಬಂಧ ಯಾವುದೇ ಶಿಫಾರಸ್ಸು ಅಧಿಕೃತವಾಗಿ ಮಾಡಲಾಗಿದ್ದಲ್ಲಿ ಅಂತಹ ಪ್ರಸ್ತಾವನೆ ಆಯ್ಕೆ ಸಮಿತಿ ಮುಂದೆ ಚರ್ಚೆಗೆ ಬಂದಾಗ ಶಿಫಾರಸ್ಸು ಮಾಡಿದ ಅಧಿಕಾರೇತರ ಸದಸ್ಯರು ಚರ್ಚೆಯಲ್ಲಿ ಭಾಗವಹಿಸತಕ್ಕದ್ದಲ್ಲ. ಈ ಮೇಲ್ಕಂಡ ಆಯ್ಕೆ ಸಮಿತಿಯು ಗೌಪ್ಯತೆಯಿಂದ ಕೂಡಿರುತ್ತದೆ. ಸರ್ಕಾರವು ಆಯ್ಕೆ ಸಮಿತಿಯ ಪ್ರಸ್ತಾವನೆಗಳನ್ನು ಅಂಗೀಕರಿಸಲಿದ್ದು, ಸರ್ಕಾರದ ಅಂತಿಮ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

(ಆರ್. ಪ್ರಭುಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.